# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೈದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಶುಕ್ರವಾರ, ದಿನಾಂಕ:17ನೇ ಡಿಸೆಂಬರ್, 2021

## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ವಿತ್ತೀಯ ಕಾರ್ಯಕಲಾಪಗಳು

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) 2021-22ನೇ ಸಾಲಿನ ಪೂರಕ ಅಂದಾಜುಗಳ 2ನೇ ಕಂತಿನ ಬೇಡಿಕೆಗಳನ್ನು ಮಂಡಿಸುವುದು

ಆ) 2021-22ನೇ ಸಾಲಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.

### 03. ಖಾಸಗಿ ಸದಸ್ಯರ ಕಾರ್ಯಕಲಾಪ

**ಖಾಸಗಿ ನಿರ್ಣಯ**

ದೇಸೀಯಾ ಪರಂಪರೆಯ ಆಯುರ್ವೇದ ವೈದ್ಯ ಪದ್ಧತಿಗೆ ಮನ್ನಣೆ ದೊರಕಿಸಿ ಕೊಡುವ ಸಲುವಾಗಿ ನೀತಿಯೊಂದನ್ನು ರೂಪಿಸುವ ಕುರಿತು ಶ್ರೀ **ಯು.ಬಿ. ವೆಂಕಟೇಶ್** ಅವರು ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

### 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| ಶ್ರೀ ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಅವರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಮತ್ತು ಅತಿವೃಷ್ಟಿಯಿಂದ ರೈತರ ಬೆಳೆಗಳು ನಾಶವಾಗಿ, ಜಾನುವಾರುಗಳ ಪ್ರಾಣ ಹಾನಿಯಾಗಿ ಸಾರ್ವಜನಿಕ ಆಸ್ತಿಗಳಿಗೆ ಧಕ್ಕೆ ಉಂಟಾಗಿರುವ ಸಮಸ್ಯೆಗಳ ಕುರಿತು. |

..2..

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ. ಹರೀಶ್ ಕುಮಾರ್** ಅವರು ಕಂದಾಯ ಇಲಾಖೆಯ ನ್ಯಾಯಾಲಯಗಳ ಡಿಕ್ರಿ ಆದೇಶದಂತೆ ಮ್ಯೂಟೇಶನ್ ಮಾಡಿ ಪಹಣಿಯಲ್ಲಿ ಬದಲಾವಣೆ ಮಾಡಲು 11 "ಇ" ನಕ್ಷೆ ಹಾಗೂ ಇತ್ಯಾದಿ ದಾಖಲೆಗಳ ಅವಶ್ಯಕತೆ ಇರುವುದಾಗಿ ತಿಳಿಸುತ್ತಿರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವ ಕಾರಣದಿಂದ ಮ್ಯೂಟೇಶನ್ ಮಾಡಿ ಪಹಣಿಯಲ್ಲಿ ಸೂಕ್ತ ಬದಲಾವಣೆ ಮಾಡಲು ಸರಳೀಕೃತ ವ್ಯವಸ್ಥೆ ಜಾರಿಗೆ ತರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.
02. **ಶ್ರೀಮತಿ ವೀಣಾ ಅಚ್ಚಯ್ಯ** ಅವರು ಪ್ರಾಕೃತಿಕ ವಿಕೋಪದಿಂದ ಕಾಫಿ ಬೆಳೆಗೆ ಆಗುತ್ತಿರುವ ನಷ್ಟಕ್ಕೆ ನ್ಯಾಯಸಮ್ಮತ ಪರಿಹಾರ ದೊರೆಯದೆ ಇರುವ ಕಾರಣ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ವಿಷಯದ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀ ಪಿ.ಆರ್. ರಮೇಶ್** ಅವರು ಲೋಕಸೇವಾ ಆಯೋಗವು ಸಲ್ಲಿಸಿದ್ದ 2011ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್‌ಗಳ ಆಯ್ಕೆ ಪಟ್ಟಿ/ಸಲಹೆಗೆ ಸಂಬಂಧಿಸಿದಂತೆ ದಿನಾಂಕ:09.03.2018ರ (ರಿಟ್ ಸಂಖ್ಯೆ:13617-13627/2017 ಮಾನ್ಯ ಉಚ್ಚ ನ್ಯಾಯಾಲಯದ ತೀರ್ಪನ್ನು ಪಾಲಿಸುವುದರ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಸಿ.ಎಂ. ಇಬ್ರಾಹಿಂ** ಅವರು ರಾಜ್ಯದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಕಾಮಗಾರಿಗಳ ಮೊತ್ತದ ಶೇಕಡ 40ರಷ್ಟು ಮೊತ್ತ ಲಂಚದ ರೂಪದಲ್ಲಿ ವ್ಯಯವಾಗುತ್ತಿದ್ದು, ಭ್ರಷ್ಟಾಚಾರ ತಾಂಡವವಾಡುತ್ತಿರುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**